ವಿ. ರಶ್ಮಿ, ಭಾ. ಆ. ಸೇ.
ಸರ್ಕಾರದ ಕಾರ್ಯದರ್ಶಿ
V. RASHMI, I.A.S.
Secretary to Government

ಕರ್ನಾಟಕ ಸರ್ಕಾರ ಸಚಿವಾಲಯ
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ
Karnataka Government Secretariat
Rural Development & Panchayat Raj Department

ಸಂ:ಗ್ರಾಅಪ 05 ಗಣಕ ಕೋಶ 2010 ದಿನಾಂಕ:08.10.2012

ಮಾನ್ಯರೇ,

ವಿಷಯ: ಪಂಚತಂತ್ರ ತಂತ್ರಾಂಶವನ್ನು ಸಂಪೂರ್ಣವಾಗಿ ಅನುಷ್ಠಾನಗೊಳಿಸುವ ಕುರಿತು.

******

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಈ ಹಿಂದೆ ಪಂಚತಂತ್ರ ತಂತ್ರಾಂಶದ ಅನುಷ್ಠಾನ ಕುರಿತು ಬಹಳಷ್ಟು ಸ್ಪಷ್ಟವಾದ ನಿರ್ದೇಶನವನ್ನು ನೀಡಲಾಗಿರುತ್ತದೆ. ಆದಾಗ್ಯೂ ಕೂಡ ಕೆಲವೊಂದು ಗ್ರಾಮ ಪಂಚಾಯತ್‌ಗಳು ಪಂಚತಂತ್ರ ತಂತ್ರಾಂಶದಲ್ಲಿ ಮಾಹಿತಿಗಳನ್ನು ಅಳವಡಿಸದೇ ಇರುವುದು ಕಂಡು ಬಂದಿರುತ್ತದೆ. ತಮಗೆ ಈ ಹಿಂದೆ 2010-11 ಮತ್ತು 2011-12ನೇ ಸಾಲಿನ ಗ್ರಾಮ ಪಂಚಾಯತ್‌ಗಳ ಲೆಕ್ಕ ಪತ್ರಗಳನ್ನು ವರ್ಷಾಂತ್ಯಗೊಳಿಸಲು ನಿರ್ದೇಶನ ನೀಡಲಾಗಿದ್ದರೂ, ಇಲ್ಲಿಯವರೆಗೆ ವರ್ಷಾಂತ್ಯಗೊಳಿಸಿರುವುದಿಲ್ಲ. ಅನುಬಂಧ-1 ಮತ್ತು 2 ರಲ್ಲಿ ಮಾಹಿತಿಯನ್ನು ವೀಕ್ಷಿಸಬಹುದಾಗಿದೆ.

ಇನ್ನು ಮುಂದೆ ರಾಜ್ಯ ಮಟ್ಟದಲ್ಲಿ ಗ್ರಾಮ ಪಂಚಾಯತ್‌ಗಳ ಮಾಹಿತಿಗಳನ್ನು ಪಂಚತಂತ್ರ ಮಾಹಿತಿಗಳನ್ನಾಧರಿಸಿಯೇ ಕ್ರಮ ಕೈಗೊಳ್ಳಲು ತೀರ್ಮಾನಿಸಲಾಗಿದೆ. ಆದ್ದರಿಂದ ರಾಜ್ಯದ ಎಲ್ಲಾ ಗ್ರಾಮ ಪಂಚಾಯತ್‌ಗಳು, ಗ್ರಾಮ ಪಂಚಾಯತ್‌ಗಳಿಗೆ ಸಂಬಂಧಿಸಿದ ಎಲ್ಲಾ ಮಾಹಿತಿಗಳನ್ನು ಪಂಚತಂತ್ರದಲ್ಲಿ ಅಳವಡಿಸಲು ಕ್ರಮಕೈಗೊಳ್ಳುವಂತೆ ಸೂಚಿಸಿದೆ. ಹಾಗೂ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳು ಪ್ರತಿ ಮಾಹೆ ಪಂಚತಂತ್ರ ತಂತ್ರಾಂಶದ ಮಾಹಿತಿಯನ್ನಾಧರಿಸಿಯೇ ಕರ ವಸೂಲಾತಿ ವರದಿ, ಗ್ರಾಮ ಸಭೆಗಳ ನಿರ್ಣಯಗಳು, ಗ್ರಾಮ ಪಂಚಾಯಿತಿ ಸಭೆಯ ನಿರ್ಣಯಗಳುಗ್ರಾಮ ಪಂಚಾಯತ್ ಸದಸ್ಯರು/ಅಧಿಕಾರಿಗಳು/ಸಿಬ್ಬಂದಿಗಳ ಮಾಹಿತಿ, ಫಲಾನುಭವಿಗಳ ವಿವರ ಹಾಗೂ ಇನ್ನಿತರ ಮಾಹಿತಿಗಳ ವಿವರಗಳನ್ನು ಪರಿಶೀಲಿಸಬೇಕು. ಯಾವ ತಾಲ್ಲೂಕಿನಲ್ಲಿ ಗ್ರಾಮ ಪಂಚಾಯತ್‌ಗಳು ಪಂಚತಂತ್ರ ತಂತ್ರಾಂಶ ಅಳವಡಿಕೆಯಲ್ಲಿ ವಿಳಂಬ ನೀತಿ ಅನುಸರಿಸುತ್ತಿವೆಯೋ ಆ ತಾಲ್ಲೂಕಿನ ಕಾರ್ಯನಿರ್ವಾಹಕ ಅಧಿಕಾರಿಗಳ ಮೇಲೆ ಕಠಿಣ ಕ್ರಮ ಜರುಗಿಸಲಾಗುವುದು.

ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್ ಇವರು ಪ್ರತಿ ಮಾಹೆ ಜರುಗಿಸುವ ತಾಲ್ಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಸಭೆಯಲ್ಲಿ ಪಂಚತಂತ್ರ ತಂತ್ರಾಂಶದಲ್ಲಿ ಮಾಹಿತಿ ಅಳವಡಿಸುವ ಕುರಿತು ಕಡ್ಡಾಯವಾಗಿ ಪರಿಶೀಲನೆ ನಡೆಸಬೇಕು. ಯಾವ ಗ್ರಾಮ ಪಂಚಾಯತ್‌ಗಳು ಪಂಚತಂತ್ರ ತಂತ್ರಾಂಶ ಅಳವಡಿಕೆಯಲ್ಲಿ ವಿಳಂಬ ನೀತಿ ಅನುಸರಿಸುತ್ತವೆಯೋ ಅಂತಹ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳ, ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಮತ್ತು ಗ್ರಾಮ ಪಂಚಾಯಿತಿ ಅಧಿಕಾರಿಗಳ/ಸಿಬ್ಬಂದಿಗಳ ಮೇಲೆ ನಿರ್ದಾಕ್ಷಿಣ್ಯವಾಗಿ ಕ್ರಮ ಜರುಗಿಸಲಾಗುವುದು.

**2010-11 ಮತ್ತು 2011-12ನೇ ಸಾಲಿನ ಲೆಕ್ಕಪತ್ರಗಳ ವರ್ಷಾಂತ್ಯಗೊಳಿಸುವ ಕಾರ್ಯವನ್ನು ಎಲ್ಲಾ ಗ್ರಾಮ ಪಂಚಾಯತ್‌ಗಳು ದಿನಾಂಕ:20.10.2012ರೊಳಗಾಗಿ ಪೂರ್ಣಗೊಳಿಸಲು ಕ್ರಮವಹಿಸುವಂತೆ ಸೂಚಿಸಿದೆ. ಯಾವ ಗ್ರಾಮ ಪಂಚಾಯತ್‌ಗಳು ಈ ಕಾರ್ಯ ಪೂರ್ಣಗೊಳಿಸುವುದಿಲ್ಲವೋ ಅಂತಹ ತಾಲೂಕು ಪಂಚಾಯತ್ ಕಾರ್ಯನಿರ್ವಾಹಕ ಅಧಿಕಾರಿಗಳ ಮತ್ತು ಗ್ರಾಮ ಪಂಚಾಯತ್ ಅಧಿಕಾರಿ/ಸಿಬ್ಬಂದಿಗಳ ವಿರುದ್ಧ ಶಿಸ್ತಿನ ಕ್ರಮ ಜರುಗಿಸಿ ಸರ್ಕಾರಕ್ಕೆ ವರದಿ ಸಲ್ಲಿಸಲು ಸೂಚಿಸಿದೆ.**

ತಮ್ಮ ವಿಶ್ವಾಸಿ,

Rashmi V.
(ವಿ. ರಶ್ಮಿ)

ರಾಜ್ಯದ ಎಲ್ಲಾ ಜಿಲ್ಲಾ ಪಂಚಾಯತ್
ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳಿಗೆ.

3ನೇ ಮಹಡಿ, 3ನೇ ಹಂತ, ಬಹುಮಹಡಿಗಳ ಕಟ್ಟಡ, ಬೆಂಗಳೂರು-560 001. 3rd Floor, 3rd Stage, M.S. Building, Bangalore-560 001.
Tel. : 2238 4574 2203 2941 Fax : 080-2238 9520 E-mail : secypr-rdpr@karnataka.gov.in / rashmi.venkataraju@gmail.com